ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

**ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ಪ್ರ.ಪ.ತಿ/01/2018–19** **ದಿನಾಂಕ: 07/02/2019**

– **ಸುತ್ತೋಲೆ** –

**ವಿಷಯ** : ಏಪ್ರಿಲ್–2019 ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳನ್ನು ಶಾಲಾ ಹಂತದಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ** : 1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ದಿನಾಂಕ:20.08.2018 ರಂದು ನಡೆದ ಸಭಾ ನಡಾವಳಿಗಳು

2. ಈ ಕಛೇರಿಯ ಸಮಸಂಖ್ಯೆಯ ಪತ್ರ ದಿ:20.12.2018

*****

ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಶಾಲಾ ಹಾಗೂ ಖಾಸಗಿ ಅಭ್ಯರ್ಥಿಗಳ) ಏಪ್ರಿಲ್ –2019 ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆನ್‌ಲೈನ್‌ನಲ್ಲಿ ಮಂಡಳಿಯ ಜಾಲತಾಣದ ಮೂಲಕ ಡೌನ್‌ಲೋಡ್ ಮಾಡಿಕೊಳ್ಳುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

1. ಮಂಡಳಿಯ ಜಾಲತಾಣ http://www.kseeb.kar.nic.in ನಲ್ಲಿ ತಂತ್ರಾಂಶ ಲಭ್ಯವಿದೆ.
2. ಈಗಾಗಲೇ ಮೌಲ್ಯಮಾಪನದ ಕಾರ್ಯಕ್ಕೆ ಶಿಕ್ಷಕರ ಮಾಹಿತಿ ಅಪ್‌ಲೋಡ್ ಹಾಗೂ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡಿರುವ ಯೂಸರ್‌ನೇಮ್ ಹಾಗೂ ಪಾಸ್‌ವರ್ಡ್‌ನ್ನು ಬಳಿಸಿ ಅಂತಿಮ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವುದು.
3. ಲಾಗ್‌ಇನ್ ಆದ ನಂತರ ಮೊದಲು ಆಯಾ ಶಾಲೆಯ ಮುಖ್ಯಸ್ಥರು ತಮ್ಮ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಬೇಕು.
4. ಪ್ರವೇಶ ಪತ್ರಗಳಲ್ಲಿನ ಎಲ್ಲಾ ಮಾಹಿತಿಗಳು ಸರಿಯಾಗಿರುತ್ತದೆ ಎಂದು ಖಚಿತಪಡಿಸಿಕೊಂಡ ನಂತರ ಆಯಾ ವಿದ್ಯಾರ್ಥಿಗಳಿಗೆ ವಿತರಿಸುವುದು.

ಮಂಡಳಿಯ ಜಾಲತಾಣದಲ್ಲಿ ಲಭ್ಯವಿರುವ ತಂತ್ರಾಂಶವನ್ನು ಬಳಸಿ ತಮ್ಮ ವ್ಯಾಪ್ತಿಯ ಎಲ್ಲಾ ಶಾಲೆಗಳ ಮುಖ್ಯಸ್ಥರು ಆಯಾ ಶಾಲೆಯ ಅಂತಿಮ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು, ಪರಿಶೀಲಿಸಿ ವಿದ್ಯಾರ್ಥಿಗಳಿಗೆ ವಿತರಿಸಿರುವುದನ್ನು ಕ್ಷೇತ್ರಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು (ಆಡಳಿತ) ರವರು ಖಾತರಿಪಡಿಸಿಕೊಳ್ಳುವುದು.

(ಸುಮಂಗಲ. ವಿ) 7/2/19
ನಿರ್ದೇಶಕರು, ಪರೀಕ್ಷೆಗಳು

**ಅಗತ್ಯ ಕ್ರಮಕ್ಕಾಗಿ :**

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ